ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ, ಕನಕಪುರ

**ಸಿ.ಸಿ. 1675/2023**

ಪಿರ್ಯಾದುದಾರರು ಃ ಕೋಡಿಹಳ್ಳಿ ಪೊಲೀಸ್ ಠಾಣೆ

– ವಿರುದ್ಧ –

ಆರೋಪಿತರಾದ ಃ ನಾಗರಾಜು ಬಿನ್ ಈರಬೋವಿ
55 ವರ್ಷಗಳು, ವೀರಯ್ಯನದೊಡ್ಡಿ
ಕೋಡಿಹಳ್ಳಿ ಹೋಬಳಿ, ಕನಕಪುರ ತಾಲ್ಲೂಕು

:: **ದೋಷಾರೋಪಣೆ** _ ::

**ಶ್ರೀಮತಿ. ಲತಾಶ್ರೀ ಬಿ.ವಿ., ಬಿ.ಎ.ಎಲ್.,ಎಲ್.ಬಿ ಒಂದನೇ ಅಪರ ನ್ಯಾಯಿಕ ದಂಡಾಧಿಕಾರಿಗಳು, ಕನಕಪುರ, ಆದ ನಾನು ನಿಮ್ಮ ಮೇಲೆ ದೋಷಾರೋಪಣೆ ಏನೆಂದರೆಃ-**

ಮಾನ್ಯ ನ್ಯಾಯಾಲಯದ ವ್ಯಾಪ್ತಿ, ಕೋಡಿಹಳ್ಳಿ ಪೊಲೀಸ್ ಠಾಣೆ ಸರಹದ್ದು ದಿನಾಂಕ 28.01.2020 ರಂದು ಸಂಜೆ ಸುಮಾರು 5.30 ಗಂಟೆಯಲ್ಲಿ ಆರೋಪಿಯಾದ ನೀವು ಕಾಡುಪ್ರಾಣಿಗಳ ಬೇಟೆಯಾಡುವ ಉದ್ದೇಶದಿಂದ ಅಕ್ರಮವಾಗಿ 15 ನಾಡ ಸಿಡಿ ಮದ್ದುಗಳನ್ನು ಮಾನ್ಯ ನ್ಯಾಯಾಲಯದ ವ್ಯಾಪ್ತಿ, ಕೋಡಿಹಳ್ಳಿ ಪೊಲೀಸ್ ಠಾಣೆ ಸರಹದ್ದು ವೀರಯ್ಯನ ದೊಡ್ಡಿ ಗ್ರಾಮದ ಬಳಿ ಇರುವ ಮಂಜುನಾಥ ಅರಣ್ಯ ಪ್ರದೇಶಕ್ಕೆ ಸೇರಿದ ಸ್ಥಳದಲ್ಲಿ ಅತಿಕ್ರಮ ಪ್ರವೇಶ ಮಾಡಿ ಅಕ್ರಮವಾಗಿ ನಿರ್ಮಾಣ ಮಾಡಿಕೊಂಡಿರುವ ಗುಡಿಸಲಿನಲ್ಲಿ ಇಟ್ಟುಕೊಂಡಿದ್ದು, ಸದರಿ ನಿಮ್ಮ ಕೃತ್ಯವು ಭಾರತ ದಂಡ ಸಂಹಿತೆ ಕಲಂ 447 ಮತ್ತು 4(B), 9(B) Explosive Act 1884 ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಸದರಿ ಅಪರಾಧಗಳು ಈ ನ್ಯಾ ಯಾಲಯದ ಸಂಜ್ಞೆಯಲ್ಲಿ ಬರುತ್ತವೆ ಮತ್ತು ಸದರೀ ವಿಚಾರಣೆಯು ನನ್ನ ಸಮಕ್ಷಮ ನಡೆಯಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

(ಈ ಆರೋಪಣೆಯನ್ನು ಈ ದಿನ ದಿನಾಂಕಃ25-10-2025 ರಂದು ಆರೋಪಿತರಿಗೆ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಆವರ ಉತ್ತರಗಳನ್ನು ಯಥಾವತ್ತಾಗಿ ದಾಖಲಿಸಿದೆ)

ಓ. ಹೇ. ಕೇ. ಸರಿ ಇದೆ.

ಒಂದನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ ಕನಕಪುರ

CC 1675/2023

**<u>ಆರೋಪಿಯ ಹೇಳಿಕೆ</u>**

ಪ್ರಶ್ನೆ-1 ಇದೀಗ ಓದಿ ಹೇಳಿದ ದೋಷಾರೋಪಣೆ ನಿಮಗೆ ಅರ್ಥವಾಯಿತೇ?

ಉತ್ತರಃ-

ಪ್ರಶ್ನೆ-2 ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬಯಸುವಿರಾ?

ಉತ್ತರಃ-

(ದಿನಾಂಕಃ25-10-2025 ರಂದು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ತಿಳಿಯುವ ಭಾಷೆಯಲ್ಲಿ ಆರೋಪವನ್ನು ಓದಿ, ತಿಳಿಸಿ ಹೇಳಿ, ಕೇಳಿ ಉತ್ತರವನ್ನು ಪಡೆಯಲಾಗಿದೆ ಎಂದು ಈ ಮೂಲಕ ದೃಡೀಕರಿಸಿದೆ.)

**ಮೊದಲನೇ ಅಪರ ಸಿಜೆ ಮತ್ತು ಜೆಎಂಎಫ್‌ಸಿ**
**ನ್ಯಾಯಾಲಯ, ಕನಕಪುರ**

**<u>ಆರೋಪಿಯ ಸಹಿ :</u>**